# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1316 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15-03-2021 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಚಿಕಿತ್ಸಾ ಕೇಂದ್ರಗಳಿವೆ ಹಾಗೂ ಈ ಚಿಕಿತ್ಸಾ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳಾವುವು; (ಮಾಹಿತಿ ನೀಡುವುದು) | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿನ ಬೆಂಗಳೂರು ನಗರ ಜಿಲ್ಲೆಯಲ್ಲಿ 36 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ವಿವರ **ಅನುಬಂಧದಲ್ಲಿ** ನೀಡಲಾಗಿದೆ.<br><br>ಪ್ರಾಥಮಿಕ ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳನ್ನು ಹಾಗೂ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ ನಿರಂತರ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ.<br><br>1. ಒಳ ಮತ್ತು ಹೊರ ರೋಗಿಗಳ ತಪಾಸಣೆ.<br>2. ಗರ್ಭಿಣಿ ಮಹಿಳೆಯರ ನೋಂದಣಿ, ಆರೋಗ್ಯ ತಪಾಸಣೆ.<br>3. ರಾಷ್ಟ್ರೀಯ ಲಸಿಕಾ ಕಾರ್ಯಕ್ರಮಗಳು.<br>4. ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಅನುಷ್ಠಾನ.<br>5. ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮ.<br>6. ತಾಯಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮ.<br>7. ರಾಷ್ಟ್ರೀಯ ಕುಷ್ಠ ರೋಗ ನಿಯಂತ್ರಣಾ ಕಾರ್ಯಕ್ರಮ.<br>8. ರಾಷ್ಟ್ರೀಯ ಕುಟುಂಬ ಕಲ್ಯಾಣ ಕಾರ್ಯಕ್ರಮ<br>9. ರಾಷ್ಟ್ರೀಯ ಕ್ಷಯ ರೋಗ ನಿಯಂತ್ರಣ ಕಾರ್ಯಕ್ರಮ.<br>10. ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮ<br>11. ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮ<br>12. ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮ.<br>13. ರಾಷ್ಟ್ರೀಯ ಫ್ಲರೋಸಿಸ್ ನಿಯಂತ್ರಣ ಕಾರ್ಯಕ್ರಮ.<br>14. ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ ಆಶಾ ಕಾರ್ಯಕ್ರಮ<br>15. ಗ್ರಾಮ ಆರೋಗ್ಯ ಮತ್ತು ನೈರ್ಮಲ್ಯ ಸಮಿತಿಗಳ ಮೇಲ್ವಿಚಾರಣೆ.<br>16. ಕೋವಿಡ್-19 ಪರೀಕ್ಷೆ |
| ಆ | ಬೆಂಗಳೂರು ನಗರ ಜಿಲ್ಲೆಯಲ್ಲಿನ ಜಿಲ್ಲಾ ಆಸ್ಪತ್ರೆಗಳಲ್ಲಿ ಎಕ್ಸ್-ರೇ, ಸಿಟಿ ಸ್ಕ್ಯಾನಿಂಗ್ ಮತ್ತು ಎಂ.ಆರ್.ಐ ಸ್ಕ್ಯಾನಿಂಗ್ ಸೌಲಭ್ಯ ಇದ್ದರೂ ರೋಗಿಗಳನ್ನು ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಕಳಿಸುತ್ತಿದ್ದು ಇದರಿಂದ ರೋಗಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಆಸ್ಪತ್ರೆಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಜಿಲ್ಲಾ ಆಸ್ಪತ್ರೆಗಳಲ್ಲಿ ರಾಷ್ಟ್ರೀಯ ಉಚಿತ ರೋಗ ಪತ್ತೆ ಸೇವೆಗಳ ಕಾರ್ಯಕ್ರಮದಡಿಯಲ್ಲಿ ಉಚಿತ ಪ್ರಯೋಗಶಾಲಾ ಪರೀಕ್ಷೆಗಳ ಸೇವೆಯನ್ನು, ಎಕ್ಸ್-ರೇ, ಸಿಟಿ ಸ್ಕ್ಯಾನಿಂಗ್ ಸೇವೆಗಳನ್ನು ಸಾರ್ವಜನಿಕರಿಗೆ ನಿರಂತರವಾಗಿ ಒದಗಿಸಲಾಗುತ್ತಿದೆ. ಅದರ ಜೊತೆಗೆ BMCRI ಸಂಸ್ಥೆಯಲ್ಲಿ MRI ಸೌಲಭ್ಯವನ್ನು ಕೂಡ ಒದಗಿಸಲಾಗಿರುತ್ತದೆ. ಆದಾಗ್ಯೂ, ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಜಿಲ್ಲಾ ಆಸ್ಪತ್ರೆಯಲ್ಲಿ ಸದರಿ ಸೇವೆಗಳು ಲಭ್ಯವಿಲ್ಲದೇ ರೋಗಿಗಳು ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಕಳುಹಿಸಿರುವ ಬಗ್ಗೆ ಪ್ರಕರಣಗಳು ವರದಿಯಾಗಿರುವುದಿಲ್ಲ. |

| | | |
|---|---|---|
| ಇ | ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಅರ್ಧದಷ್ಟು ಔಷಧಿಗಳು ಲಭ್ಯವಿಲ್ಲದ ಕಾರಣ ರೋಗಿಗಳು ಖಾಸಗಿ ಔಷಧ ಮಳಿಗೆಗಳಿಗೆ ಹೋಗುತ್ತಿರುವ ಬಗ್ಗೆ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು; ಸರ್ಕಾರವೇನಾದರೂ ಖಾಸಗಿ ಔಷಧಿ ಮಳಿಗೆಗಳಿಗೆ ಲಾಭ ಮಾಡಿಕೊಡುವ ಉದ್ದೇಶವೇನಾದರೂ ಹೊಂದಿದೆಯೇ? (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಆರೋಗ್ಯ ಸಂಸ್ಥೆಗಳಿಗೆ ಅಗತ್ಯವಿರುವ ಔಷಧಗಳನ್ನು ಬೇಡಿಕೆಗೆ ಅನುಗುಣವಾಗಿ ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ (KSMSCL) ಇವರಿಂದ ಟೆಂಡರ್ ಮೂಲಕ ಖರೀದಿಸಿ ಜಿಲ್ಲಾ ಔಷಧ ಉಗ್ರಾಣಗಳ ಮೂಲಕ ಸರಬರಾಜು ಮಾಡಲಾಗುತ್ತಿದೆ. ಇದಲ್ಲದೆ, ಆಯಾಯ ಜಿಲ್ಲಾ ಆಸ್ಪತ್ರೆಗಳಲ್ಲಿರುವ ಜಿಲ್ಲಾ ರಕ್ಷಾ ಸಮಿತಿ ನಿಧಿ ಮತ್ತು ಮುಕ್ತನಿಧಿಯಡಿ ಇರುವ ಅನುದಾನದಿಂದ ಔಷಧಿಗಳನ್ನು ಖರೀದಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ 1999 ಮತ್ತು ನಿಯಮ 2000 ಕಲಂ 4ಜಿ ಅಡಿಯಲ್ಲಿ ಕರ್ನಾಟಕ ಆಂಟಿಬಯೋಟಿಕ್ ಮತ್ತು ಫಾರ್ಮಸ್ಯೂಟಿಕಲ್ಸ್ ಲಿಮಿಟೆಡ್ ಸಂಸ್ಥೆಯಿಂದ 55 ಔಷಧಿಗಳನ್ನು ರೂ. 119.63 ಕೋಟಿಗಳ ವೆಚ್ಚದಲ್ಲಿ ಖರೀದಿಸಿ ಜಿಲ್ಲಾ ಔಷಧ ಉಗ್ರಾಣಗಳಿಗೆ ಸರಬರಾಜು ಮಾಡಲಾಗಿದೆ.<br><br>2019-20ನೇ ಸಾಲಿನಲ್ಲಿ ರೂ. 303.60 ಕೋಟಿ ಅನುದಾನದಲ್ಲಿ 654 ಔಷಧಿಗಳಿಗೆ ಅನುಮೋದನೆ ನೀಡಲಾಗಿದ್ದು, ಇದರಲ್ಲಿ ಅರ್ಹ ಸಂಸ್ಥೆಗಳಿಂದ 114 ಔಷಧಿಗಳನ್ನು ಟೆಂಡರ್ ಮೂಲಕ ಖರೀದಿಸಿ 26 ಜಿಲ್ಲಾ ಔಷಧ ಉಗ್ರಾಣಗಳಿಗೆ ಸರಬರಾಜು ಮಾಡಲು ಆದೇಶ ನೀಡಲಾಗಿರುತ್ತದೆ. ಉಳಿದ ಔಷಧಿಗಳನ್ನು ಸಂಗ್ರಹಿಸಲು ಟೆಂಡರ್ ಆಹ್ವಾನಿಸಲಾಗಿರುತ್ತದೆ. |

**ಸಂಖ್ಯೆ:ಆಕುಕ 28 ಎಸ್ಎಂಎಂ 2021**

(ಡಾ|| ಕೆ.ಸುಧಾಕರ್)
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು**

## ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:-1316 ಕ್ಕೆ ಅನುಬಂಧ

| ಕ್ರಸಂ | ತಾಲ್ಲೂಕು | ಪ್ರಾಥಮಿಕ ಆರೋಗ್ಯ ಕೇಂದ್ರಗಳು |
|---|---|---|
| 1 | ಆನೇಕಲ್ | ಆನೇಕಲ್ |
| 2 | | ದೊಮ್ಮಸಂದ್ರ (24*7) |
| 3 | | ಸರ್ಜಾಪುರ (24*7) |
| 4 | | ಅತ್ತಿಬೆಲೆ (24*7) |
| 5 | | ಹಾರಗದ್ದೆ (24*7) |
| 6 | | ಜಿಗಣಿ (24*7) |
| 7 | | ಹೆಬ್ಬಗೋಡಿ (24*7) |
| 8 | | ಚಂದಾಪುರ (24*7) |
| 9 | | ಇಂಡವಾಡಿ |
| 10 | | ಮರಸೂರು |
| 11 | | ಎಂ.ಎಲ್.ಪುರ |
| 12 | | ಬೆಳ್ಳೂರು |
| 13 | | ಗುಡ್ಡಹಟ್ಟಿ |
| 14 | ಬೆಂಗಳೂರು ಪೂರ್ವ | ಕೆ.ಎಸ್.ಹಳ್ಳಿ |
| 15 | | ಬಿದರಹಳ್ಳಿ |
| 16 | | ಕೊಡತಿ |
| 17 | | ಕಣ್ಣೂರು |
| 18 | | ಹಾಲನಾಯಕನಹಳ್ಳಿ |
| 19 | | ಮಂಡೂರು |
| 20 | ಬೆಂಗಳೂರು ಉತ್ತರ | ಬೆಟ್ಟಹಲಸೂರು (24*7) |
| 21 | | ಹೆಸರಘಟ್ಟ (24*7) |
| 22 | | ಸೊಣ್ಣೆನಹಳ್ಳಿ |
| 23 | | ಗೋಪಾಲಪುರ |
| 24 | | ಬಾಗಲೂರು (24*7) |
| 25 | | ಸೊಂಡೆಕೊಪ್ಪ (24*7) |
| 26 | | ಮಾಕಳಿ (24*7) |
| 27 | | ರಾಜಾನುಕುಂಟೆ |
| 28 | | ಚಿಕ್ಕಜಾಲ |
| 29 | | ಚಿಕ್ಕಬಾಣಾವಾರ |
| 30 | | ಕನ್ನಲಿ |
| 31 | | ಮಾಚೋಹಳ್ಳಿ |
| 32 | ಬೆಂಗಳೂರು ದಕ್ಷಿಣ | ತಾವರೆಕೆರೆ (24*7) |
| 33 | | ಕೆ.ಗೊಲ್ಲಹಳ್ಳಿ |
| 34 | | ಬೊಳಾರೆ |
| 35 | | ಸೂಲಿಕೆರೆ |
| 36 | | ಕುಂಬಳಗೋಡು |